KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-123
ಶುಕ್ರವಾರ 14 ಮಾರ್ಚ್ 2025
Price: 2.00 Rs. Pages-2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508

## ಕಾಲಜ್ಞಾನಿ ಶ್ರೀ ಯೋಗಿ ನಾರೇಯಣ ಯತೀಂದ್ರರ ಜಯಂತೋತ್ಸವ ಇಂದು

ತುಮಕೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯುತ್, ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಜಿಲ್ಲಾ ಬಲಿಜ ಸಂಘದ ಸಹಯೋಗದಲ್ಲಿ ಮಾರ್ಚ್ 14ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಡಾ: ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ "ಕಾಲಜ್ಞಾನಿ ಶ್ರೀ ಯೋಗಿ ನಾರೇಯಣ ಯತೀಂದ್ರರ 299ನೇ ಜಯಂತೋತ್ಸವ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ಜನಪ್ರತಿನಿಧಿಗಳು, ಗಣ್ಯರು, ಅಧಿಕಾರಿಗಳು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ದ್ವಿತೀಯ ಪಿಯುಸಿ ಪರೀಕ್ಷೆ: 984 ವಿದ್ಯಾರ್ಥಿಗಳು ಗೈರು

ತುಮಕೂರು: ಜಿಲ್ಲೆಯಲ್ಲಿ ಇಂದು ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ-1ರ ಅರ್ಥಶಾಸ್ತ್ರ ವಿಷಯದಲ್ಲಿ 984 ವಿದ್ಯಾರ್ಥಿಗಳು ಗೈರು ಹಾಜರಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಬಾಲಗುರುಮೂರ್ತಿ ತಿಳಿಸಿದ್ದಾರೆ.

ಅರ್ಥಶಾಸ್ತ್ರ ವಿಷಯಕ್ಕೆ ಒಟ್ಟು 13,828 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಈ ಪೈಕಿ 12,844 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ ಎಂದು ಅವರು ತಿಳಿಸಿದ್ದಾರೆ.

## ಕರಿಗಿರಿ ಕ್ಷೇತ್ರ ದೇವರಾಯನದುರ್ಗದ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ಬ್ರಹ್ಮರಥೋತ್ಸವ

ತುಮಕೂರು: ಇತಿಹಾಸ ಪ್ರಸಿದ್ಧ ಕರಿಗಿರಿ ಕ್ಷೇತ್ರ ದೇವರಾಯನದುರ್ಗದ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ಬ್ರಹ್ಮರಥೋತ್ಸವವು ಸಹಸ್ರಾರು ಭಕ್ತಾದಿಗಳ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು.

ಕರಿಗಿರಿ ಕ್ಷೇತ್ರದಲ್ಲಿ ಲಕ್ಷ್ಮೀನರಸಿಂಹ ಸ್ವಾಮಿಯ ಬ್ರಹ್ಮರಥೋತ್ಸವವು ಮಧ್ಯಾಹ್ನ ಭಕ್ತಾದಿಗಳ ಹರ್ಷೋದ್ಗಾರದ ನಡುವೆ ಗರುಡ ಬಂದು ರಥವನ್ನು ಪ್ರದಕ್ಷಿಣೆ ಹಾಕಿದ ನಂತರ ವಿದ್ಯುಕ್ತವಾಗಿ ನೆರವೇರಿತು.

ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ, ಶಾಸಕ ಬಿ. ಸುರೇಶ್‌ಗೌಡ, ಜಿಲ್ಲಾಧಿಕಾರಿ ಶುಭಕಲ್ಯಾಣ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ., ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ, ತಹಶೀಲ್ದಾರ್ ರಾಜೇಶ್ವರಿ, ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಟಿ. ಸುನೀಲ್‌ಕುಮಾರ್ ಅವರು ಶ್ರೀಲಕ್ಷ್ಮೀನರಸಿಂಹಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದರು.





ನಂತರ ರಥೋತ್ಸವಕ್ಕೆ ಚಾಲನೆ ದೊರೆಯಿತು.

ರಥೋತ್ಸವದ ಅಂಗವಾಗಿ ಮುಂಜಾನೆಯೇ ಶ್ರೀಸ್ವಾಮಿಗೆ ಅಭಿಷೇಕ ನೆರವೇರಿತು. ದೇವರು ಮತ್ತು ರಥಕ್ಕೆ ಗೆ ವಿವಿಧ ಬಗೆಯ ಹೂವುಗಳಿಂದ ವಿಶೇಷ ಅಲಂಕಾರ ಮಾಡಲಾಗಿತ್ತು.

ಮುಂಜಾನೆಯಿಂದಲೇ ವಿಶೇಷ ಧಾರ್ಮಿಕ ಪೂಜಾ ಕೈಂಕರ್ಯಗಳು ನೆರವೇರಿದ್ದು, 7 ಗಂಟೆಯ ನಂತರ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ಭಕ್ತರ ಮನೆಗಳಿಗೆ ತೆರಳಿ ವಿಶೇಷ ಪೂಜೆ ಸಲ್ಲಿಕೆಯಾದ ನಂತರ ಮಧ್ಯಾಹ್ನ ರಥದ ಬಳಿ ಬಂದ ದೇವರನ್ನು ರಥಕ್ಕೆ ಕೂರಿಸಲಾಯಿತು.

ರಥಕ್ಕೆ ಗರುಡ ಪ್ರದಕ್ಷಿಣೆ ಹಾಕಿದ ನಂತರ ಭಕ್ತರ ಜೈಕಾರ, ವೇದ ಘೋಷದೊಂದಿಗೆ ರಥವನ್ನು ಮುಂದಕ್ಕೆ ಎಳೆಯಲಾಯಿತು. ರಥದ ಗಾಲಿಗಳು ಮುಂದಕ್ಕೆ ಚಲಿಸುತ್ತಿದ್ದಂತೆ ನೆರೆದಿದ್ದ ಭಕ್ತರ ಹರ್ಷೋದ್ಘಾರ ಮುಗಿಲು ಮುಟ್ಟಿತು. ಭಕ್ತಾದಿಗಳು ರಥಕ್ಕೆ ಹೂ, ಬಾಳೆಹಣ್ಣು, ದವನ ಎಸೆಯುವ ಮೂಲಕ ತಮ್ಮ ಹರಕೆ ತೀರಿಸಿದರು.

ರಥೋತ್ಸವದಲ್ಲಿ ಪಾಲ್ಗೊಳ್ಳಲು ಬಂದ ಭಕ್ತಾದಿಗಳಿಗೆ ಅಲ್ಲಲ್ಲಿ ಕೊಪ್ಪಲು ಹಾಕಿಕೊಂಡಿದ್ದ ಭಕ್ತರು ಪಾನಕ, ಮಜ್ಜಿಗೆ ನೀಡಿ ಅವರ ದಣಿವನ್ನು ತಣಿಸಿದರು. ಹಾಗೆಯೇ ದೇವಾಲಯದ ವತಿಯಿಂದಲೂ ಭಕ್ತಾದಿಗಳಿಗಾಗಿ ಪ್ರಸಾದ ವಿನಿಯೋಗದ ವ್ಯವಸ್ಥೆ ಮಾಡಲಾಗಿತ್ತು.

ರಥೋತ್ಸವದಲ್ಲಿ ರಾಜ್ಯದ ವಿವಿಧೆಡೆಗಳಿಂದ ಸಹಸ್ರಾರು ಭಕ್ತಾದಿಗಳು ಪಾಲ್ಗೊಂಡಿದ್ದರು.

## ಅಂಬೇಡ್ಕರ್ ಜನ್ಮದಿನದಂದು ನಗರದಲ್ಲಿ ಭೀಮೋತ್ಸವ

### ಕಲ್ಪತರು ಸಾಂಸ್ಕೃತಿಕ ವೇದಿಕೆಯಿಂದ ಸಂವಿಧಾನ ಶಿಲ್ಪಿಗೆ ಗೌರವಾರ್ಪಣೆ

ತುಮಕೂರು: ಡಾ.ಬಿ.ಆರ್.ಅಂಬೇಡ್ಕರ್ ಅವರು ರಚಿಸಿದ ಭಾರತ ಸಂವಿಧಾನ ಅಂಗೀಕಾರದ 75 ವರ್ಷದ ಸಂದರ್ಭದಲ್ಲಿ ಕಲ್ಪತರು ಸಾಂಸ್ಕೃತಿಕ ವೇದಿಕೆ ನೇತೃತ್ವದಲ್ಲಿ ವಿವಿಧ ಸಂಘಟನೆಗಳು ಏಪ್ರಿಲ್ 14ರಂದು ಅಂಬೇಡ್ಕರ್ ಜನ್ಮದಿನದಂದು ನಗರದಲ್ಲಿ ಸಂವಿಧಾನ ಶಿಲ್ಪಿಯನ್ನು ಸಂಭ್ರಮಿಸುವ ಭೀಮೋತ್ಸವ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮ ಸಂಬಂಧ ಕಲ್ಪತರು ಸಾಂಸ್ಕೃತಿಕ ವೇದಿಕೆ ಅಧ್ಯಕ್ಷ ಸೋಮಶೇಖರ್ ಅಧ್ಯಕ್ಷತೆಯಲ್ಲಿ ವಿವಿಧ ದಲಿತಪರ, ಕನ್ನಡಪರ ಹಾಗೂ ಹಲವು ಸಾಮಾಜಿಕ ಸಂಘಟನೆಗಳ ಮುಖಂಡರು ಗುರುವಾರ ನಗರದಲ್ಲಿ ಸಭೆ ಸೇರಿ ಚರ್ಚೆ ನಡೆಸಿದರು.

ಸಭೆಯಲ್ಲಿ ಮಾತನಾಡಿದ ವೇದಿಕೆ ಅಧ್ಯಕ್ಷ ಸೋಮಶೇಖರ್, ಭಾರತಕ್ಕೆ ಶ್ರೇಷ್ಠ ಸಂವಿಧಾನ ನೀಡಿದ ಡಾ.ಬಿ.ಆರ್.ಅಂಬೇಡ್ಕರ್ ಅವರು ಭಾರತೀಯರ ಘನತೆಯ ಜೀವನಕ್ಕೆ ಕಾರಣರಾಗಿದ್ದಾರೆ. ಅವರನ್ನು ದೇಶದ ಪ್ರತಿಯೊಬ್ಬ ಪ್ರಜೆಯೂ ಗೌರವದಿಂದ ಸ್ಮರಿಸುತ್ತಾರೆ. ಸಂವಿಧಾನ ಅಂಗೀಕಾರಗೊಂಡ 75 ವರ್ಷ ತುಂಬಿದ ಈ ಸಂದರ್ಭದಲ್ಲಿ



ಡಾ.ಅಂಬೇಡ್ಕರ್ ಅವರ ಜನ್ಮದಿನವಾದ ಏಪ್ರಿಲ್ 14ರಂದು ಅವರ ಕೊಡುಗೆ ಸ್ಮರಿಸಿ ಸಂಭ್ರಮಿಸುವ ಕಾರ್ಯಕ್ರ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಅಂಬೇಡ್ಕರ್ ಕೇವಲ ದಲಿತರ ನಾಯಕರಲ್ಲ, ಭಾರತದ ಎಲ್ಲಾ ವರ್ಗದವರೂ ಸಂವಿಧಾನದ ಪ್ರಯೋಜನ ಪಡೆಯುವವರೇ ಆಗಿರುವುದರಿಂದ ಅವರು ಎಲ್ಲರ ನಾಯಕ, ಜಗತ್ತಿನ ಅನೇಕ ರಾಷ್ಟ್ರಗಳು ನಮ್ಮ ಸಂವಿಧಾನವನ್ನು ಒಪ್ಪಿದ್ದು, ಅಂಬೇಡ್ಕರ್ ವಿಶ್ವ ನಾಯಕರಾಗಿದ್ದಾರೆ. ಅವರ ಚಿಂತನೆಗಳನ್ನು ಜನರಿಗೆ ಪ್ರಚಾರ ಮಾಡುವುದು ಈ ಕಾರ್ಯಕ್ರಮದ ಆಶಯವಾಗಿದೆ ಎಂದರು.

ಅಂದು ನಗರದ ಬಿಜಿಎಸ್ ವೃತ್ತದಿಂದ ಅಂಬೇಡ್ಕರ್ ಅವರ ಭಾವಚಿತ್ರದ ಅದ್ದೂರಿ ಮೆರವಣಿಗೆ ಏರ್ಪಡಿಸಲಾಗಿದೆ. ಹೆಸರಾಂತ ಜಾನಪದ ಕಲಾ ತಂಡಗಳ ಆಕರ್ಷಕ ಪ್ರದರ್ಶನದೊಂದಿಗೆ ವೈಭವದ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ ಎಂದು ಸೋಮಶೇಖರ್ ಹೇಳಿದರು.

ಕಾಂಗ್ರೆಸ್ ಮುಖಂಡ ಇಕ್ಬಾಲ್ ಅಹ್ಮದ್, ಕನ್ನಡ ಸೇನೆ ಜಿಲ್ಲಾಧ್ಯಕ್ಷ ಧನಿಯಾಕುಮಾರ್, ಜಿಲ್ಲಾ ದಲಿತ ಸಂಘರ್ಷ ಸಮಿತಿ ಅಧ್ಯಕ್ಷ ಪಿ.ಎನ್.ರಾಮಯ್ಯ, ಕಾಡುಗೊಲ್ಲರ ಪರಿಷತ್ತಿನ ರಾಜ್ಯಾಧ್ಯಕ್ಷ ಅರುಣ್ ಕೃಷ್ಣಯ್ಯ ಮಾತನಾಡಿದರು.

ಕನ್ನಡ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಶಂಕರ್, ಭಗತ್ ಕ್ರಾಂತಿ ಸೇನೆಯ ಚೇತನ್, ಕರ್ನಾಟಕ ಮಾದಿಗರ ಸಂಘದ ಹೆಚ್.ಆರ್.ರಾಮಮೂರ್ತಿ, ಟಿ.ಸಿ.ರಾಮಯ್ಯ, ವಿವಿಧ ಸಂಘಟನೆಗಳ ಮುಖಂಡರಾದ ಕೊಟ್ಟ ಶಂಕರ್, ಹೊಸಕೋಟೆ ನಟರಾಜ್, ಕನ್ನಡ ಪ್ರಕಾಶ್, ಜೆಸಿಬಿ ವೆಂಕಟೇಶ್, ಮಿಸೆ ಸತೀಶ್, ರಾಮಚಂದ್ರರಾವ್, ಶಬ್ಬೀರ್‌ಅಹ್ಮದ್, ಭಾಗ್ಯಮ್ಮ, ಚಕ್ರವರ್ತಿ ಪ್ರಕಾಶ್ ಮತ್ತಿತರರು ಭಾಗವಹಿಸಿದ್ದರು.

## 'ಒಳಮೀಸಲಾತಿ ಜಾರಿ ಮಾಡಿ; ಇಲ್ಲ ಖುರ್ಚಿ ಖಾಲಿ ಮಾಡಿ': ದಲಿತ ಮುಖಂಡರ ಎಚ್ಚರಿಕೆ



ಕೊರಟಗೆರೆ: ಒಳಮೀಸಲಾತಿ ಹೋರಾಟಗಾರರ ಮೇಲೆ ವಿನಾಕಾರಣ ದಬ್ಬಾಳಿಕೆ ನಡೆಸಿರುವ ಡಿವೈಎಸ್ಪಿ ಶಿವಕುಮಾರ್ ನಡೆ ಖಂಡನೀಯ. ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಏ.19ರಂದು ನಡೆಯುವ ರಾಜ್ಯಮಟ್ಟದ ಬೃಹತ್ ಪ್ರತಿಭಟನಾ ಸಮಾವೇಶಕ್ಕೆ ನಾವು ಸಿದ್ದರಿದ್ದೇವೆ ಎಂದು ದಲಿತ ಸಂರಕ್ಷಣಾ ಸಮಿತಿ ರಾಜ್ಯಸಂಚಾಲಕ ಟೈಗರ್‌ನಾಗ್ ತಿಳಿಸಿದರು.

ಕೊರಟಗೆರೆ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಒಳಮೀಸಲಾತಿ ಜಾರಿಗಾಗಿ ಮಾದಿಗ ಸಮುದಾಯಗಳ ಸ್ವಾಭಿಮಾನದ ಕೊರಟಗೆರೆ ಒಕ್ಕೂಟದಿಂದ ಬುಧವಾರ ಏರ್ಪಡಿಸಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಒಳಮೀಸಲಾತಿ ಪ್ರಕ್ರಿಯೆಯನ್ನು ಕರ್ನಾಟಕ ಸರಕಾರ ತ್ವರಿತವಾಗಿ ಜಾರಿ ಮಾಡದೇ ಇದ್ದರೇ ಕೊರಟಗೆರೆ ಕ್ಷೇತ್ರದಿಂದಲೇ ಮತ್ತೇ ಹೋರಾಟದ ರೂಪುರೇಷು ಸಿದ್ದವಾಗುತ್ತೇ. ರಾಜ್ಯದ ಸಿಎಂ ಸಿದ್ದರಾಮಯ್ಯ ಮತ್ತು ಗೃಹಸಚಿವ ಡಾ.ಜಿ.ಪರಮೇಶ್ವರ್ ನಮ್ಮ ಮನವಿಯನ್ನು ಆಲಿಸಿ ಚುನಾವಣೆ ವೇಳೆ ನೀಡಿದ ದಲಿತರ ಒಳಮೀಸಲಾತಿ ಭರವಸೆಯನ್ನು ಈಡೇರಿಸಬೇಕು ಎಂದು ಆಗ್ರಹ ಮಾಡಿದರು.

ಕೊರಟಗೆರೆ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಚಿಕ್ಕರಂಗಯ್ಯ ಮಾತನಾಡಿ ದಲಿತಪರ ಸಂಘಟನೆಗಳ 35ವರ್ಷದ ಹೋರಾಟದ ಪ್ರತಿಫಲಕ್ಕೆ ಸುಪ್ರಿಂಕೋರ್ಟ್ ನಮ್ಮ ಪರವಾಗಿ ಆದೇಶ ಮಾಡಿದೆ. ರಾಜ್ಯ ಸರಕಾರ ಚುನಾವಣೆಯಲ್ಲಿ ನೀಡಿದ ಭರವಸೆಯನ್ನು ಈಡೇರಿಸಬೇಕು. ರಾಜಕೀಯ ಕುತಂತ್ರಕ್ಕೆ ಯಾವುದೇ ಸೋಪ್ಪುಹಾಕದೇ ದಲಿತರ ಬೇಡಿಕೆಯನ್ನು ಈಡೇರಿಸಬೇಕು. ಇಲ್ಲವಾದ್ರೇ ಹೋರಾಟ ಅನಿವಾರ್ಯ ಎಂದರು.

ಕೊರಟಗೆರೆ ದಲಿತ ಮುಖಂಡ ವೆಂಕಟೇಶ್ ಮಾತನಾಡಿದರು.

ಸುದ್ದಿಗೋಷ್ಟಿಯಲ್ಲಿ ದಲಿತ ಮುಖಂಡರಾದ ದೊಡ್ಡಯ್ಯ, ವೀರಕ್ಯಾತರಾಯ, ನರಸಿಂಹಮೂರ್ತಿ, ಶಿವರಾಮಯ್ಯ, ಜಗದೀಶ್, ಮಂಜುನಾಥ ಸೇರಿದಂತೆ ಇತರರು ಇದ್ದರು.

## ಪೋಲೀಸ್ ಇಲಾಖೆಯಿಂದ ನಾಳೆ ಕುರುಕ್ಷೇತ್ರ ನಾಟಕ

ತಿಪಟೂರು : ನಗರದ ಉಪವಿಭಾಗ ಪೋಲೀಸ್ ಇಲಾಖೆಯ ವತಿಯಿಂದ ಶ್ರೀ ಮಾರುತಿ ಕೃಪಾಪೋಷಿತ ನಾಟಕ ಮಂಡಳಿವತಿಯಿಂದ ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಮಾರ್ಚ್ 15 ಶನಿವಾರ ದಂದು ರಾತ್ರಿ 8.30 ಕ್ಕೆ ದಿ.ಪುಟ್ಟಸ್ವಾಮಯ್ಯ ವಿರಚಿತ ಕುರುಕ್ಷೇತ್ರ ಅಥವಾ ಧರ್ಮರಾಜ್ಯ ಸ್ಥಾಪನೆ ಎಂಬ ಪೌರಾಣಿಕ ನಾಟಕವನ್ನು ಪ್ರದರ್ಶನ ನೀಡಲಿದ್ದಾರೆ. ಹಾಗೂ ವಾದ್ಯಗೋಷ್ಠಿ ವೃಂದದವರಾಗಿ ನಟರಾಜು ಕ್ಯಾಸಿಯೋ, ಮಂಜುನಾಥ್ ತಬಲ, ನವೀನ್ ಕ್ಲಾರಿಯೋನೆಟ್ ಮತ್ತು ಹನುಮಂತರಾಜು ಕಡೆಯಿಂದ ಎಲ್.ಇ.ಡಿ. ಸ್ಕ್ರೀನ್ ಡ್ರಾಮಾ ಸೀನರಿ ವ್ಯವಸ್ಥೆ ಮಾಡಲಾಗಿದೆ.

## ಹನಿಟ್ರ್ಯಾಪ್ ಕಿರುಕುಳ: ಠಾಣೆಯಲ್ಲಿ ಪ್ರಕರಣ ದಾಖಲಿಸಿದ ಪಪಂ ಮಾಜಿ ಅಧ್ಯಕ್ಷ

ಗುಬ್ಬಿ: ಹನಿಟ್ರ್ಯಾಪ್‌ಗೆ ಸಿಲುಕಿ ಲಲನೆಯೊಬ್ಬಳ ಮೋಸದ ಜಾಲಕ್ಕೆ ಸಿಲುಕಿ ಬ್ಲ್ಯಾಕ್ ಮೇಲ್ ಗೆ ಒಳಗಾದ ಪಪಂ ಮಾಜಿ ಅಧ್ಯಕ್ಷ ಜಿ.ಎನ್.ಅಣ್ಣಪ್ಪಸ್ವಾಮಿ ಬೆದರಿಕೆಗೆ ಹೆದರಿ ಲಕ್ಷಾಂತರ ರೂಗಳ ದಂಡ ತೆತ್ತುವ ಮುನ್ನ ಗುಬ್ಬಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.





ಕಳೆದ 45 ದಿನಗಳಿಂದ ನಡೆದ ಈ ಹೈಡ್ರಾಮಾ ಫೇಸ್ ಬುಕ್ ಮೂಲಕ ಲಲನೆಯೊಬ್ಬಳ ಸ್ನೇಹ ಬೆಳೆಸಿ ದಿನ ಕಳೆದಂತೆ ಹನಿ ಟ್ರ್ಯಾಪ್ ಗೆ ಸಿಲುಕಿದ ಪಟ್ಟಣ ಪಂಚಾಯಿತಿ ನಿಕಟ ಪೂರ್ವ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ಜಿ.ಎನ್.ಅಣ್ಣಪ್ಪಸ್ವಾಮಿ ಬರೋಬ್ಬರಿ 20 ಲಕ್ಷ ರೂಗಳ ಹಣದ ಬೇಡಿಕೆಗೆ ಹೆದರಿ ಗುಬ್ಬಿ ಪೊಲೀಸರ ಮೊರೆಹೋಗಿದ್ದಾರೆ.

ಫೇಸ್ ಬುಕ್ ನಲ್ಲಿ ಸ್ನೇಹ ಬೆಳೆದ ನಂತರ ಹಾಯ್, ಬಾಯ್, ಗುಡ್ ಮಾರ್ನಿಂಗ್, ಅಂತೆಲ್ಲ ಬೆಳೆದ ಸ್ನೇಹ ಸಲುಗೆ ಮಿತಿ ಮೀರಿ ವಿಡಿಯೋ ಕಾಲಿಂಗ್ ಮಾಡಿ ಮಾತನಾಡುವ ಘಟ್ಟ ತಲುಪಿದೆ. ಇದನ್ನೇ ಬಂಡವಾಳ ಮಾಡಿಕೊಂಡ ಆ ಮಹಿಳೆ ಹಲವು ಕಡೆ ಬಲವಂತವಾಗಿ ಕರೆಸಿಕೊಂಡು ಮದುವೆಯಾಗುವಂತೆ ಒತ್ತಾಯಿಸುತ್ತಿದಳು ಎನ್ನಲಾಗಿದೆ.

ತಿಪಟೂರು, ದೊಡ್ಡಬಳ್ಳಾಪುರ, ನೆಲಮಂಗಲ ಹೀಗೆ ನಾನಾ ಕಡೆ ಕರೆದು ಪ್ರೀತಿಸುತ್ತಿದ್ದೇನೆ ನನ್ನನ್ನು ಮದುವೆ ಮಾಡಿಕೊಳ್ಳಿ ಎಂದು ಒತ್ತಡ ಹಾಕಿ ಇದಕ್ಕೆ ಒಪ್ಪದಿದ್ದ ಕಾರಣ ಸ್ನೇಹಿತರೊಂದಿಗೆ ಸೇರಿ ಅವಳ ಜೊತೆಗಿನ ಫೋಟೋ, ವಿಡಿಯೋ ವೈರಲ್ ಮಾಡುವುದಾಗಿ ಹೆದರಿಸಿ ಹಣದ ಬೇಡಿಕೆ ಇಟ್ಟಿದ್ದಾಳೆ ಎಂಬುದು ಮಾಜಿ ಅಧ್ಯಕ್ಷರ ಗಂಭೀರ ಆರೋಪವಾಗಿದೆ.

ದೂರು ಅರ್ಜಿ ಹೊರತಾಗಿ ಕೆಲ ಪ್ರಶ್ನೆಗಳು ಸಾರ್ವಜನಿಕ ವಲಯದಲ್ಲಿ ಹಲವು ಬಿಸಿ ಚರ್ಚೆಗೆ ಗ್ರಾಸವಾಗಿದೆ. ಬಿಜೆಪಿ ಮುಖಂಡ ಅಣ್ಣಪ್ಪಸ್ವಾಮಿ ಬ್ಲ್ಯಾಕ್ ಮೇಲರ್ ಮಹಿಳೆಯ ಗೆಳೆತನ ನಂತರ ಭೇಟಿ, ದಿಢೀರ್ ಪ್ರೇಮ, ಆಮೇಲೆ ಅಲ್ಲಲ್ಲಿ ಮೀಟಿಂಗ್ ಮಾಡಿಕೊಂಡು ಒಂದು ಕಡೆ ಸೇರೋದು ಈಗೆಲ್ಲಾ ನಡೆಯುತ್ತಿದ್ದ ಸಲುಗೆ ಈಗ ಪೊಲೀಸ್ ಠಾಣೆ ಮೆಟ್ಟಿಲೇರಿದೆ. ಈ ಜೊತೆ ಮತ್ತೊಬ್ಬ ಮಹಿಳೆಯ ಹೆಸರು ತಳುಕು ಹಾಕಿಕೊಂಡಿದೆ.

ಬೆಂಗಳೂರು ಕಡೆಗೆ ತೆರಳಲು ಹೇಳಿ ದೊಡ್ಡಬಳ್ಳಾಪುರ ಕಡೆ ಕರೆದುಕೊಂಡು ಹೋದ ಮಹಿಳೆ ದಾರಿಯುದ್ದಕ್ಕೂ ಬೆದರಿಕೆ ಹಾಕಿ ಸಾಮಾಜಿಕ ಜಾಲ ತಾಣಗಳಲ್ಲಿ ಫೋಟೋ ವಿಡಿಯೋ ವೈರಲ್ ಮಾಡಿ ಮಾನ ಮರ್ಯಾದೆ ತೆಗೆಯುವ ಬೆದರಿಕೆಯಲ್ಲೇ ಹೊಟೇಲ್ ರೂಂ ನಲ್ಲಿ ಇಬ್ಬರು ಯುವಕರನ್ನು ಕರೆಸಿ ಬೆದರಿಕೆ ಹಾಕಿ ಕೊನೆಗೆ ಹಣಕ್ಕೆ ಬೇಡಿಕೆ ಇಡಲಾಗಿದೆ ಎಂದು ದೂರು ಉಲ್ಲೇಖ ಮಾಡಿದ್ದಾರೆ.

ದೂರು ಆಧರಿಸಿ ಗುಬ್ಬಿ ಪೊಲೀಸರು ಪ್ರಕರಣ ದಾಖಲಾಗಿಸಿ ಈ ಸಂಬಂಧ ಇಬ್ಬರು ಮಹಿಳೆಯರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿ ಸಾಂತ್ವನ ಕೇಂದ್ರದಲ್ಲಿ ಇರಿಸಿದ್ದಾರೆ. ಮಹಿಳೆಯರ ಜೊತೆ ಸೇರಿಕೊಂಡು ಹಣಕ್ಕೆ ಬೇಡಿಕೆ ಇಟ್ಟಿದ್ದಾರೆ ಎನ್ನಲಾದ ಗುಬ್ಬಿ ಪಟ್ಟಣದ ಯುವಕ ಭರತ್ ಮತ್ತು ಬಿಲ್ಲೇಪಾಳ್ಯ ಬಸವರಾಜು ಎಂಬುವರ ಸೆರೆಗೆ ತಂಡ ರಚಿಸಿದ್ದಾರೆ.

## ತುರುವೇಕೆರೆ ಪ.ಪಂ. 2025-26ನೇ ಸಾಲಿನ ಆಯವ್ಯಯ ಮಂಡನೆ

### 30ಲಕ್ಷ ರೂಗಳ ಉಳಿತಾಯ ಬಜೆಟ್ ಮಂಡಿಸಿದ ಅಧ್ಯಕ್ಷೆ ಸ್ವಪ್ನ ನಟೇಶ್

ತುರುವೇಕೆರೆ: ಸ್ಥಳೀಯ ಪಟ್ಟಣ ಪಂಚಾಯ್ತಿಯ 2025-26ನೇ ಸಾಲಿನ ಆಯವ್ಯಯ ಸಭೆ ಇಂದು ಪಪಂ ಅಧ್ಯಕ್ಷೆ ಸ್ವಪ್ನ ನಟೇಶ್ ಅಧ್ಯಕ್ಷತೆಯಲ್ಲಿ ನಡೆಯಿತು. ಸಭೆಯಲ್ಲಿ ಆಯವ್ಯಯ ಮಂಡಿಸಿದ ಪಟ್ಟಣ ಪಂಚಾಯ್ತಿ ಅಧ್ಯಕ್ಷೆ ಸ್ವಪ್ನ ನಟೇಶ್ 2025-26ನೇ ಸಾಲಿಗೆ 30ಲಕ್ಷ ರೂಗಳ ಉಳಿತಾಯ ಬಜೆಟ್ ಮಂಡಿಸಿದರು.



2024-25ನೇ ಸಾಲಿನ ಪ್ರಾರಂಭಿಕ ಶಿಲ್ಕು 24,90,585 ರೂ, 2025-26ನೇ ಸಾಲಿಗೆ ನಿರೀಕ್ಷಿಸಲಾದ ಒಟ್ಟು ಆದಾಯ 12ಕೋಟಿ 49ಲಕ್ಷದ 25ಸಾವಿರ ರೂ ಒಟ್ಟು 12 ಕೋಟಿ 74 ಲಕ್ಷದ 15ಸಾವಿರದ 585ರೂಗಳಲ್ಲಿ 2025-26ನೇ ಸಾಲಿಗೆ ನಿರೀಕ್ಷಿಸಲಾದ ಪಾವತಿ 12ಕೋಟಿ 44 ಲಕ್ಷದ 25ಸಾವಿರ ಕಳೆದರೆ ಪಟ್ಟಣ ಪಂಚಾಯ್ತಿಯು 2025-26ನೇ ಸಾಲಿಗೆ 29ಲಕ್ಷದ 90ಸಾವಿರ 585 ರೂಗಳ ಉಳಿತಾಯದಲ್ಲಿದೆ ಎಂದರು.

2025-26ನೇ ಸಾಲಿಗೆ ನಿರೀಕ್ಷಿಸಲಾಗಿರುವ ಆದಾಯದ ಪ್ರಕಾರ ಆಸ್ತಿ ತೆರಿಗೆ 1ಕೋಟಿ 15ಲಕ್ಷ, ನೀರಿನ ತೆರಿಗೆ 36ಲಕ್ಷ, ಅಂಗಡಿ ಬಾಡಿಗೆ 12ಲಕ್ಷದ 50ಸಾವಿರ, ಉದ್ದಿಮೆ ಪರವಾನಗಿ ಶುಲ್ಕ 10ಲಕ್ಷ, ಸಾಮಾನ್ಯ ತೆರಿಗೆ ಆದಾಯ 43ಲಕ್ಷದ 70ಸಾವಿರ, ರಾಜ್ಯ ಹಣಕಾಸು ಆಯೋಗದ ವೇತನ ಅನುದಾನ 1ಕೋಟಿ 45ಲಕ್ಷ, ವಿದ್ಯುತ್ ಅನುದಾನ 1 ಕೋಟಿ 20ಲಕ್ಷ, ಮುಕ್ತ ನಿಧಿ ಅನುದಾನ 25ಲಕ್ಷ ಒಟ್ಟು ರಾಜಸ್ವ ಸ್ವೀಕೃತಿ 5ಕೋಟಿ 7ಲಕ್ಷದ 20ಸಾವಿರ ರೂಗಳು. ಬಂಡವಾಳ ಸ್ವೀಕೃತಿಯಲ್ಲಿ 15ನೇ ಹಣಕಾಸು ಯೋಜನೆ ಅನುದಾನ 1ಕೋಟಿ, ರಾಜ್ಯ ಹಣಕಾಸು ಆಯೋಗದ ವಿಶೇಷ ಅನುದಾನ 1ಕೋಟಿ 20ಲಕ್ಷ, ಸಿಎಂ ನಗರೋತ್ಥಾನ ಯೋಜನೆ ಅನುದಾನ 3ಕೋಟಿ, ಕುಡಿಯುವ ನೀರು ಯೋಜನೆ ಅನುದಾನ 5ಲಕ್ಷ, ಸ್ವಚ್ಛ ಭಾರತ್ ಮಿಷನ್ 2.0 ಯೋಜನೆ ಅನುದಾನ 1ಕೋಟಿ ಒಟ್ಟು ಬಂಡವಾಳ ಸ್ವೀಕೃತಿಯಲ್ಲಿ 6ಕೋಟಿ 25ಲಕ್ಷ, ಅಸಾಮಾನ್ಯ ಸ್ವೀಕೃತಿಯಲ್ಲಿ ಶೇ.24.10, ಶೇ7.25, ಶೇ.5, ಶೇ.1ರ ಕಾರ್ಯಕ್ರಮಕ್ಕೆ 23ಲಕ್ಷದ 5ಸಾವಿರ, ಆಸ್ತಿ ತೆರಿಗೆ ಮೇಲಿನ ಉಪಕರಣಗಳ ವಸೂಲಾತಿ 25ಲಕ್ಷ, ಗುತ್ತಿಗೆದಾರರ ಕಾಮಗಾರಿ ಬಿಲ್‌ಗಳಿಂದ ಜಮಾ 21ಲಕ್ಷ, ನೌಕರರ ವೇತನದಲ್ಲಿ ಜಮಾ 30ಲಕ್ಷ, ಗೃಹಭಾಗ್ಯ ಯೋಜನೆ ಅನುದಾನ 10ಲಕ್ಷ, ಎಸ್.ಸಿ.ಎಫ್ ವಂತಿಕೆ ಸರ್ಕಾರದ ಅನುದಾನ 3ಲಕ್ಷ, ಜನಗಣತಿ ಸೇವಾ ಕಾರ್ಯಕ್ಕೆ ಅನುದಾನ 5ಲಕ್ಷ ಒಟ್ಟು 1 ಕೋಟಿ 17 ಲಕ್ಷದ 5 ಸಾವಿರ ರೂ ಅಸಾಮಾನ್ಯ ಸ್ವೀಕೃತಿಯಲ್ಲಿ ಬರುವ ಆದಾಯವಾಗಿದೆ. ಒಟ್ಟಾರೆ ಪಟ್ಟಣ ಪಂಚಾಯ್ತಿಗೆ 2025-26ನೇ ಸಾಲಿಗೆ ನಿರೀಕ್ಷಿಸಲಾದ ಒಟ್ಟು ಆದಾಯ 12ಕೋಟಿ 49ಲಕ್ಷದ 25ಸಾವಿರ ರೂ ಆದಾಯ ನಿರೀಕ್ಷಿಸಲಾಗಿದೆ ಎಂದರು.


ಪಟ್ಟಣದಲ್ಲಿ ಟ್ರಾಫಿಕ್ ಸಮಸ್ಯೆ ವಿಪರೀತವಾಗುತ್ತಿದ್ದು, ನಾಗರೀಕರು ಪಟ್ಟಣ ಪಂಚಾಯ್ತಿ ಸದಸ್ಯರಾದ ನಮಗೆ ಬೈಯುತ್ತಿದ್ದಾರೆ, ಬೀದಿಬದಿ ವ್ಯಾಪಾರಸ್ಥರು ರಸ್ತೆ ಬದಿ ಬಿಟ್ಟು ರಸ್ತೆಯಲ್ಲೇ ವ್ಯಾಪಾರ ಪ್ರಾರಂಭಿಸಿದ್ದಾರೆ. ಇದರಿಂದ ನಾಗರೀಕರಿಗೆ ಬಹಳ ತೊಂದರೆಯಾಗುತ್ತಿದೆ. ನ್ಯಾಯಾಲಯ ಆದೇಶವಿದೆ. ಕೂಡಲೇ ಪಟ್ಟಣದ ಹೃದಯಭಾಗದಲ್ಲಿ ನಿರ್ಮಿಸಲಾಗಿರುವ ವಾಣಿಜ್ಯ ಸಂಕೀರ್ಣದಲ್ಲಿ ಅಂಗಡಿ ಮಳಿಗೆಯ ಹರಾಜು ಪ್ರಕ್ರಿಯೆಗೆ ಚಾಲನೆ ನೀಡಬೇಕು ಎಂದು ಸದಸ್ಯರೆಲ್ಲರೂ ಒಕ್ಕೊರಲಿನಿಂದ ಆಗ್ರಹಿಸಿದರು.

ಸಭೆಯಲ್ಲಿ ಪಪಂ ಉಪಾಧ್ಯಕ್ಷೆ ಭಾಗ್ಯ, ಸದಸ್ಯರಾದ ಎನ್.ಆರ್.ಸುರೇಶ್, ಅಂಜನ್ ಕುಮಾರ್, ಆರ್.ಮಧು, ಯಜಮಾನ್ ಮಹೇಶ್, ಚಿದಾನಂದ್, ಪ್ರಭಾಕರ್, ರವಿ, ನದೀಮ್ ಅಹಮದ್, ಶೀಲಾ, ಆಶಾ, ಮೇಘನಾ, ಜಯಮ್ಮ, ನಾಮಿನಿ ಸದಸ್ಯರಾದ ರುದ್ರೇಶ್, ಶ್ರೀನಿವಾಸಮೂರ್ತಿ, ಪಪಂ ಮುಖ್ಯಾಧಿಕಾರಿ ಶ್ರೀನಾಥ್ ಬಾಬು, ಕಂದಾಯ ನಿರೀಕ್ಷಕ ಪ್ರಶಾಂತ್, ಲೆಕ್ಕಾಧಿಕಾರಿ ಸದಾನಂದ್, ಅಧಿಕಾರಿಗಳು ಉಪಸ್ಥಿತರಿದ್ದರು.

## ಮತದಾರರ ಪಟ್ಟಿ ತಯಾರಿಕೆ ಸಂದರ್ಭದಲ್ಲಿ ಆಯೋಗದ ಮಾರ್ಗಸೂಚಿ ಪಾಲನೆಗೆ ಸೂಚನೆ

ತುಮಕೂರು: ಮತದಾರರ ಪಟ್ಟಿ ತಯಾರಿಕೆ ಸಂದರ್ಭದಲ್ಲಿ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಉಪ ವಿಭಾಗಾಧಿಕಾರಿ ಗೌರವ ಕುಮಾರ್ ಶೆಟ್ಟಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ತುಮಕೂರು ಉಪವಿಭಾಗ ಮಟ್ಟದ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮತದಾರರ ಪಟ್ಟಿ ತಯಾರಿಕೆ ಸಂಬಂಧ ಮತದಾರರ ನೋಂದಣಾಧಿಕಾರಿಗಳ ಕರಡು ಕೈಪಿಡಿ ಕುರಿತು ನೋಂದಾಯಿತ ಹಾಗೂ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಂದ ಅಭಿಪ್ರಾಯಗಳನ್ನು ಪಡೆಯುವ ಸಂಬಂಧ ಉಪ ವಿಭಾಗಾಧಿಕಾರಿಗಳ ನ್ಯಾಯಾಲಯ ಸಭಾಂಗಣದಲ್ಲಿ ಬುಧವಾರ ನಡೆದ ಸಭೆಯಲ್ಲಿ ಮಾತನಾಡಿದ ಅವರು, ತುಮಕೂರು ಉಪವಿಭಾಗ ವ್ಯಾಪ್ತಿಗೊಳಪಡುವ ಪ್ರತಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಮತದಾರರ ಪಟ್ಟಿಯಿಂದ ಅನರ್ಹರ ಹೆಸರನ್ನು ಕೈಬಿಡಬೇಕು.



ಮತದಾರರು ಎರಡು ಕಡೆ ಹೆಸರನ್ನು ನೋಂದಾಯಿಸಿಕೊಂಡಿದ್ದರೆ ಒಂದು ಕಡೆ ಅವರ ಹೆಸರನ್ನು ಪಟ್ಟಿಯಿಂದ ತೆಗೆದು ಹಾಕಬೇಕು. ಮತದಾರರು ಮೃತರಾಗಿದ್ದರೆ, ವರ್ಗಾವಣೆಯಾಗಿದ್ದರೆ ಅಂತಹವರ ಹೆಸರನ್ನು ಕೈಬಿಟ್ಟು ನಿಖರವಾದ ಮತದಾರರ ಪಟ್ಟಿಯನ್ನು ಸಿದ್ಧಪಡಿಸಬೇಕೆಂದು ನಿರ್ದೇಶನ ನೀಡಿದರು.

ಮತದಾರರ ಪಟ್ಟಿಗೆ ಹೆಸರನ್ನು ಹೊಸದಾಗಿ ಸೇರ್ಪಡೆ, ಕೈಬಿಡುವ, ತಿದ್ದುಪಡಿ ಮತ್ತಿತರ ಪ್ರಕ್ರಿಯೆಗಳು ನಿರಂತರವಾಗಿ ನಡೆಯುತ್ತಿರುತ್ತವೆ ಹಾಗೂ 18 ವರ್ಷ ತುಂಬಿದ ಅರ್ಹ ಮತದಾರರಿಗೆ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸುವ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ನೋಂದಾಯಿತ ಹಾಗೂ ಮಾನ್ಯತೆ ಪಡೆದ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಸಲಹೆಗಳನ್ನು ನೀಡಿದರು. ತಹಶೀಲ್ದಾರ್ ರಾಜೇಶ್ವರಿ, ಚುನಾವಣಾ ಶಿರಸ್ತೆದಾರ್ ಆರ್.ಜಿ ನಾಗಭೂಷಣ್ ಹಾಗೂ ಗುರುಪ್ರಸಾದ್, ಮತ್ತಿತರರು ಹಾಜರಿದ್ದರು.

# ಮಾದೇನಹಳ್ಳಿ ಮಲ್ಲಿಕಾರ್ಜುನಯ್ಯ ಶರಣರಂತೆ ಬದುಕಿದವರು: ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು



ತುಮಕೂರು: ನಡೆದಾಡುವ ದೇವರಾದ ಪರಮಪೂಜ್ಯಡಾ. ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮೀಜಿಯವರ ದಿವ್ಯ ಕೃಪಾದೃಷ್ಟಿಗೆ ಪಾತ್ರರಾಗಿದ್ದ ಮಾದೇನಹಳ್ಳಿ ಮಲ್ಲಿಕಾರ್ಜುನಯ್ಯನವರು ಒಬ್ಬ ಆದರ್ಶ ಶರಣರಂತೆ ಬದುಕಿ ಮುಂದಿನ ಯುವಜನಾಂಗಕ್ಕೆ ಮಾದರಿಯಾಗಿದ್ದರು ಎಂದು ಸಿದ್ಧಗಂಗಾ ಮಠದ ಪೂಜ್ಯ ಅಧ್ಯಕ್ಷರಾದ ಶ್ರೀ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಅವರು ತುಮಕೂರು ಜಿಲ್ಲಾ ಹಾಗು ತಾಲ್ಲೂಕು ಶರಣ ಸಾಹಿತ್ಯ ಪರಿಷತ್ತಿನ ವತಿಯಿಂದ ನಡೆದ ಲಿಂ. ಮಾದೇನಹಳ್ಳಿ ಮಲ್ಲಿಕಾರ್ಜುನಯ್ಯನವರ ಸಾಮಾಜಿಕ ಸೇವಾನಿಷ್ಠೆ ವಿಚಾರ ಸಂಕಿರಣವನ್ನು ಶ್ರೀಕ್ಷೇತ್ರದ ಕನ್ನಡ ಪಂಡಿತ್ ಕಾಲೇಜಿನ ಸ್ವಾಮೀಜಿ ಸಭಾಂಗಣದಲ್ಲಿ ಆಶೀರ್ವಚನ ನೀಡುತ್ತಾ ಶರಣರು ಬದುಕಿದ ರೀತಿ ಎಂದೆಂದಿಗೂ ಆದರ್ಶ. ಬ್ರಹ್ಮಚಾರಿಯಾಗಿ ಬದುಕಿದ್ದ ಮಲ್ಲಿಕಾರ್ಜುನಯ್ಯನವರು ಅತ್ಯಂತ ಬಡತನದಲ್ಲಿ ಬಂದು, ಶ್ರೀ ಶಿವಕುಮಾರಸ್ವಾಮಿಗಳ ಆದೇಶದಂತೆ ಮೈಸೂರಿನಲ್ಲಿ ಓದಿ, ನಂತರ ಬೆಂಗಳೂರಿನಲ್ಲಿ ಉದ್ಯೋಗಿಯಾಗಿ ನೂರಾರು ಸಾಹಿತಿಗಳೊಂದಿಗೆ ಪತ್ರ ವ್ಯವಹಾರ ಮಾಡುತ್ತಾ ಸಾಹಿತ್ಯ ಪರಿಚಾರಕರೂ ಆಗಿದ್ದರು. ಕುವೆಂಪು, ಶಿವರಾಮಕಾರಂತ, ಹರಿದಾಸಭಟ್ಟ, ವಿ.ಸೀತಾರಾಮಯ್ಯರವರೊಂದಿಗೆ ನೂರಾರು ಪತ್ರ ಬರೆದವರು ಎಂದು ಶ್ಲಾಘಿಸಿದರು.

ನಂತರ ವಿಚಾರ ಸಂಕಿರಣ ಉದ್ಘಾಟಿಸಿದ ಟಿ.ಕೆ.ನಂಜುಂಡಪ್ಪನವರು ಶರಣ ಶ್ರೇಷ್ಠ ಮಲ್ಲಿಕಾರ್ಜುನಯ್ಯನವರ ಪತ್ರಗಳಲ್ಲಿನ ಜೀವನ ಮೌಲ್ಯ ಕುರಿತು ಮಾತನಾಡಿದರು. ವಿದ್ವಾನ್ ಕೋ.ರಂ.ಬಸವರಾಜುರವರು ಸಾಮಾಜಿಕ ಚಿಂತನೆ ಕುರಿತು ಮಾತನಾಡಿದರು. ಅಧ್ಯಕ್ಷ ಸ್ಥಾನದಿಂದ ವಿದ್ವಾನ್ ಎಂ.ಜಿ.ಸಿದ್ಧರಾಮಯ್ಯನವರು ಮಾತನಾಡಿದರು.

ಮಾದಾಪುರ ಶಿವಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ವಿಶ್ವನಾಥಯ್ಯನವರು ಆಶಯ ನುಡಿಗಳನ್ನಾಡಿದರು. ಇದೇ ಸಂದರ್ಭದಲ್ಲಿ ಹಿರಿಯ ನಿವೃತ್ತ ನೌಕರ ಶಿವರುದ್ರಯ್ಯ ಹಾಗೂ ರೇಣುಕಾರಾಧ್ಯರಿಗೆ ಶರಣ ಸೇವಾ ಗೌರವ ನೀಡಿ ಸತ್ಕರಿಸಲಾಯ್ತು.

# ಮಹಿಳೆಯರಲ್ಲಿ ಧೈರ್ಯ ಮತ್ತು ಆತ್ಮವಿಶ್ವಾಸ ವಿರಬೇಕು: ಡಾ.ಭಾವನಾ ಪ್ರಸಾದ್



ತಿಪಟೂರು: ಎಲ್ಲಾ ರಂಗಗಳಲ್ಲಿಯೂ ಸ್ಥಾನಮಾನ ಪಡೆದುಕೊಂಡಿರುವ ಮಹಿಳೆ ಒತ್ತಡದ ಜೀವನ, ಸಂಕುಚಿತ ಮನೋಭಾವದಿಂದ ಹೊರಬಂದು ಆತ್ಮಸ್ಥೈರ್ಯ ಬೆಳೆಸಿಕೊಂಡಾಗ ಮಾತ್ರ ಸಮಾಜದಲ್ಲಿ ಧೈರ್ಯ, ಆತ್ಮವಿಶ್ವಾಸದಿಂದ ಬದುಕು ನಡೆಸಬಹುದು ಎಂದು ತುಮಕೂರು ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ಮನೋವೈದ್ಯರು ಹಾಗೂ ಸಹ ಪ್ರಾಧ್ಯಾಪಕಿ ಡಾ. ಭಾವನಾ ಪ್ರಸಾದ್ ತಿಳಿಸಿದರು.

ನಗರದ ಕಲ್ಪತರು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಕಾಲೇಜಿನ ಅಂತರಿಕ ದೂರು ಸಮಿತಿ ವತಿಯಿಂದ ಆಯೋಜಿಸಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಂಚಾರಣೆಯನ್ನ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರು ತಾವು ಮಲ್ಟಿಟಾಸ್ಕಿಂಗ್ ಮಾಡುತ್ತೇವೆಂಬ ಬರದಲ್ಲಿ ಅನಾವಶ್ಯಕ ಒತ್ತಡವನ್ನು ಅನುಭವಿಸುವುದನ್ನು ಬಿಡಬೇಕು. ಬೇರೆಯವರ ಉಸಾಬರಿ ಬಿಟ್ಟು, ತಮ್ಮ ಸಂತೋಷದ ಬಗ್ಗೆ ಹಾಗೂ ಕೆಲಸದ ಬಗ್ಗೆ ಗಮನಹರಿಸಬೇಕು. ನಮ್ಮ ಸಂತೋಷ ನಮ್ಮ ಕೈಯಲ್ಲಿದ್ದು ನಾವು ಇರುವ ಹಾಗೆಯೇ ನಮ್ಮನ್ನು ಒಪ್ಪಿಕೊಳ್ಳುವುದನ್ನು ಕಲಿಯಬೇಕು. ವಿದ್ಯಾರ್ಥಿಗಳು ತಮ್ಮ ತಾಂತ್ರಿಕ ಜ್ಞಾನದೊಂದಿಗೆ ಜೀವನ ಕೌಶಲ್ಯಗಳನ್ನು ರೂಡಿಸಿಕೊಳ್ಳಬೇಕು. ಮೊಬೈಲ್ ಮತ್ತು ಮೀಡಿಯಾಗಳನ್ನು ನಿಮ್ಮ ಒಳಿತಿಗೆ ಹಾಗೂ ಬೆಳವಣಿಗೆಗಾಗಿ ಬಳಸುವುದನ್ನು ಕಲಿಯಬೇಕು. ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಸೈಬರ್ ಕ್ರೈಂ ಮತ್ತು ಲವ್ ಬ್ರೇಕಪ್‌ನಂತ ಸಣ್ಣ ವಿಷಯಗಳಿಗೆ ಆತ್ಮಹತ್ಯೆ ಮಾಡಿಕೊಳ್ಳುವುದು ವಿಷಾದಕರ. ಏಕೆಂದರೆ ಯಾವುದೇ ವಿಷಯದಲ್ಲಿ ನಾವು ಸೋತಾಗ ಅದೇ ಜೀವನ ಕೊನೆಯಾಗಿರುವುದಿಲ್ಲ. ಅದು ನಮ್ಮ ಜೀವನದ ಮತ್ತೊಂದು ಮಜಲು ತೆರೆದುಕೊಳ್ಳಲು ನಮಗೆ ಸಿಗುವ ಒಳ್ಳೆಯ ಅವಕಾಶವಾಗಿರುತ್ತದೆ.

ನಮ್ಮ ಭಾವನೆಗಳನ್ನು ಸಂಭಾಳಿಸುವ ಕೌಶಲ್ಯವನ್ನು ಕಲಿಯುವುದು ಅವಶ್ಯ. ಮನೋ ಆರೋಗ್ಯದ ಬಗ್ಗೆ ಸಮಾಜದಲ್ಲಿ ಬೇರೆಯದ್ದೇ ಭಾವನೆ ಇದ್ದು ಇದು ಕಡಿಮೆಯಾಗಬೇಕು. ಮನೋದೈಹಿಕ ಆರೋಗ್ಯದ ಅರಿವು ಎಲ್ಲರಿಗೂ ಅಗತ್ಯ ಎಂದರು.

ಪ್ರಾಂಶುಪಾಲ ಡಾ. ಜಿ.ಡಿ. ಗುರುಮೂರ್ತಿ ಮಾತನಾಡಿ ಇತ್ತೀಚಿನ ದಿನಗಳಲ್ಲಿ ಹೆಣ್ಣುಮಕ್ಕಳ ಅಭ್ಯುದಯದ ಬಗ್ಗೆ ತಂದೆ ತಾಯಿಗಳ ಜವಾಬ್ದಾರಿ ಜೊತೆಗೆ ಸರ್ಕಾರವೂ ಕೂಡ ಅನೇಕ ಸೌಲಭ್ಯಗಳನ್ನು ಹಮ್ಮಿಕೊಂಡಿದೆ. ನಿರ್ಭಯ ವರ್ಕಿಂಗ್ ವುಮನ್ ಹಾಸ್ಟೆಲ್‌ಗಳ ವ್ಯವಸ್ಥೆ ಹೀಗೆ ಹಲವು ಸೌಲಭ್ಯಗಳ ಮುಖಾಂತರ ಸಮಸ್ಯೆಗಳಿಗೆ ಸಮಾಜವು ಸ್ಪಂದಿಸುತ್ತಿದೆ. ತಂದೆ, ತಾಯಂದಿರು ಮಕ್ಕಳನ್ನು ಬೆಳೆಸುವ ರೀತಿ ಸುಧಾರಿಸಬೇಕು. ನಮ್ಮ ಕಾಲೇಜಿನ ಆಂತರಿಕ ದೂರು ಸಮಿತಿಯು ವಿದ್ಯಾರ್ಥಿಗಳಿಗೆ, ಸಿಬ್ಬಂದಿ ವರ್ಗದವರ ಸಮಸ್ಯೆಗಳಿಗೆ ಸದಾ ಸ್ಪಂದಿಸುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಲ್ಪತರು ಮಹಾವಿದ್ಯಾಸಂಸ್ಥೆಯ ಕಾರ್ಯದರ್ಶಿ ಎಂ.ಆರ್. ಸಂಗಮೇಶ್ ಮಾತನಾಡಿ, ಹೆಣ್ಣು ಮನೆಯ ಬೆಳಗುವ ದೀಪ. ನಾಲ್ಕು ಗೋಡೆಗೆ ಸೀಮಿತವಾಗಿದ್ದ ಹೆಣ್ಣು ಇಂದು ಎಲ್ಲಾ ಕ್ಷೇತ್ರದಲ್ಲೂ ಛಾಪುಮೂಡಿಸಿ ಪುರುಷರಿಗೆ ಸರಿಸಮನಾಗಿದ್ದಾರೆ. ನಮ್ಮ ಸಂಸ್ಥೆಯಲ್ಲಿ ಇರುವ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಹೆಣ್ಣು ಮಕ್ಕಳ ಸಂಖ್ಯೆ ಶೇ.50ಕ್ಕಿಂತಲೂ ಹೆಚ್ಚಿದ್ದು ನಮ್ಮ ಸಂಸ್ಥೆಯು ಮಹಿಳೆಯರ ಅಭಿವೃದ್ಧಿಗೆ ಸದಾ ಶ್ರಮಿಸುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಕುಂದುಕೊರತೆಯ ವಿಭಾಗದ ಸದಸ್ಯೆಯರಾದ ಸ್ವರ್ಣಗೌರಿ, ಸುಮನ್, ಸುಮ, ಜಗದಾಂಬ, ಆಂತರಿಕ ದೂರು ಸಮಿತಿಯ ಸದಸ್ಯರಾದ ಡಾ. ದೀಪ್ತಿ ಅಮಿತ್, ಡಾ. ಹನುಂತಪ್ಪ,

ಸಿಐಸಿಸಿಯ ಮುಖ್ಯಸ್ಥೆ ಡಾ. ಹೆಚ್.ಎನ್ ಚಂದ್ರಕಲಾ, ವಕೀಲೆ ಶೋಭಾಜಯದೇವ್ ಸೇರಿದಂತೆ ಸದಸ್ಯರುಗಳು ಹಾಗೂ ಎಲ್ಲಾ ವಿಭಾಗದ ಮುಖ್ಯಸ್ಥರು ಭಾಗವಹಿಸಿದ್ದರು. ನಂತರ ಮಹಿಳಾ ದಿನದ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿ ವಿಜೇತರಾದವರಿಗೆ ಬಹುಮಾನ ನೀಡಲಾಯಿತು.

# ಕಟ್ಟಡ ಕಾರ್ಮಿಕರು ಸವಲತ್ತು ಸದುಪಯೋಗ ಪಡೆದುಕೊಳ್ಳಿ: ಶಾಸಕ ಎಚ್.ವಿ.ವೆಂಕಟೇಶ್



ಪಾವಗಡ: ಕಟ್ಟಡಕಾರ್ಮಿಕರು ಇಲಾಖೆಯಿಂದ ನೀಡುವ ಸವಲತ್ತುಗಳನ್ನು ಸಮರ್ಪಕವಾಗಿ ಉಪಯೋಗಿಸಿಕೊಳ್ಳಬೇಕು ಎಂದು ಶಾಸಕ ಎಚ್.ವಿ. ವೆಂಕಟೇಶ್ ತಿಳಿಸಿದರು.

ಪಟ್ಟಣದ ಗುರುಭವನದಲ್ಲಿ ಗುರುವಾರ ಕಾರ್ಮಿಕ ಇಲಾಖೆಯಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಕಟ್ಟಡಕಾರ್ಮಿಕರಿಗೆ ಕಿಟ್ ಗಳನ್ನು ಮರಣ, ಮದುವೆ, ಅಂತ್ಯತಕ್ರೀಯೆ, ಅರೋಗ್ಯ ಸಹಾಯಧನದ ಅದೇಶ ಪತ್ರಗಳನ್ನು ವಿತರಿಸಿ ಮಾತನಾಡಿ, ಕಟ್ಟಡ ಕಾರ್ಮಿಕರು 60 ವರ್ಷ ನಂತರ ಮಾಶಾಸನ, ವಿದ್ಯಾಬ್ಯಾಸಕ್ಕೆ ಶೈಕ್ಷಣಿಕ ಸಹಾಯಧನ, ಅರೋಗ್ಯ ಸವಲತ್ತುಗಳನ್ನು ನೀಡುತ್ತಿದ್ದು, ತಮ್ಮ ಮಕ್ಕಳನ್ನು ಉತ್ತಮ ವಿದ್ಯಾವಂತರಾಗಿಸಬೇಕು ಎಂದು ತಿಳಿಸಿ, ತಾಲ್ಲೂಕಿನಲ್ಲಿ ಅರ್ಹ ಕಟ್ಟಡ ಕಾರ್ಮಿಕರನ್ನು ನೊಂದಾಯಿಸಿಲು ಕಾರ್ಮಿಕ ನೀರೀಕ್ಷಕರಾದ ಹರೀಶ್ ಕುಮಾರ್ ಗೆ ಖಡಕ್ ಹೆಚ್ಚರಿಕೆ ನೀಡಿದರು.

ಮಾಜಿ ಕಾರ್ಮಿಕ ಸಚಿವರಾದ ವೆಂಕಟರವಣಪ್ಪ ಮಾತನಾಡಿದರು. ಇದೇ ವೇಳೆ ಶಾಸಕರ ಕಛೇರಿಯಲ್ಲಿ ಕೈಗಾರಿಕಾ ಇಲಾಖೆಯಿಂದ ಗುರುವಾರ ವೃತ್ತಿಪರ ಕುಶಲಕರ್ಮಿಗಳಾದ ಕ್ಷೌರಿಕ, ದೋಬಿ, ಬಡಗಿ ಕಾರ್ಮಿಕರಿಗೆ ಉಚಿತ ಪರಿಕರಗಳನ್ನು ವಿತರಿಸಲಾಯಿತು. ಈ ವೇಳೆ ಪುರಸಭಾ ಸದಸ್ಯರಾದ ಕಲ್ಪವೃಕ್ಷ ರವಿ, ಗುತ್ತಿಗೆದಾರರಾದ ಆರ್. ಎ. ಹನುಮಂತರಾಯ, ಕಾರ್ಮಿಕಾಧಿಕಾರಿ ಹರೀಶ್ ಕುಮಾರ್, ಮಧುಗಿರಿ ಕಾರ್ಮಿಕ ವಿಸ್ತರ್ಣಾಧಿಕಾರಿ ಶ್ರೀಕಾಂತ್, ಫೈರಜ್ ಖಾನ್, ರೆಹಮಾನ್, ಮಾಜಿ ಪುರಸಭಾ ಸದಸ್ಯ ರಿಜ್ವಾನ್ ಹುಲ್ಲಾ, ಕಾರ್ಮಿಕ ಮುಖಂಡರಾದ ಗೌಡರಂಗಪ್ಪ, ಕೃಷ್ಣಮೂರ್ತಿ, ರಾಮಕೃಷ್ಣ, ಜೆ. ಅಂಜಯ್ಯ, ಹಮಾಲಿ ರಾಮಾಂಜಿನಪ್ಪ, ಬ್ಯಾಡನೂರು ಶಾಂತರಾಜಯ್ಯ, ಎಚ್.ಎಸ್. ಭಾಗ್ಯಲಕ್ಷ್ಮಿ, ಮೈಲಾರಲಿಂಗಪ್ಪ, ಮತ್ತಿತರಿದ್ದರು,

# ರಾಜಕೀಯ ಪಕ್ಷಗಳ ಅಧ್ಯಕ್ಷರು ನಾಯಕರೊಂದಿಗೆ ಸಭೆ ನಡೆಸಲು ಚುನಾವಣಾ ಆಯೋಗ ಸೂಚನೆ

ತುಮಕೂರು: ಚುನಾವಣಾ ಪ್ರಕ್ರಿಯೆಗಳನ್ನು ಮತ್ತಷ್ಟು ಬಲಪಡಿಸಲು ಕಾನೂನಿನ ಚೌಕಟ್ಟಿನೊಳಗೆ ಸಂವಹನ ನಡೆಸುವ ಉದ್ದೇಶದೊಂದಿಗೆ ಚುನಾವಣಾ ಆಯೋಗವು ರಾಜಕೀಯ ಪಕ್ಷಗಳ ಅಧ್ಯಕ್ಷರು ಹಾಗೂ ಹಿರಿಯ ನಾಯಕರೊಂದಿಗೆ ಸಭೆಗಳನ್ನು ಹಮ್ಮಿಕೊಳ್ಳಲು ಎಲ್ಲಾ ಚುನಾವಣಾಧಿಕಾರಿಗಳಿಗೆ ಸೂಚಿಸಿದೆ.

ಚುನಾವಣೆಗಳಿಗೆ ಸಂಬಂಧಿಸಿದಂತೆ ತಾಲೂಕು ಮಟ್ಟದಲ್ಲಿ ಚುನಾವಣಾ ನೊಂದಣಾಧಿಕಾರಿಗಳು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳು ಅಥವಾ ರಾಜ್ಯ ಮಟ್ಟದಲ್ಲಿ ಮುಖ್ಯ ಚುನಾವಣಾಧಿ ಕಾರಿಗಳು ಬಗೆಹರಿಸಲಾಗದ ಯಾವುದೇ ಸಮಸ್ಯೆಗಳಿಗೆ ಸಂಬಂಧಿಸಿದಂತೆ, ಎಲ್ಲಾ ರಾಷ್ಟ್ರೀಯ ಮತ್ತು ರಾಜ್ಯ ರಾಜಕೀಯ ಪಕ್ಷಗಳ ಸಲಹೆಗಳನ್ನು ಕ್ರೂಢೀಕರಿಸಿ 2025ರ ಏಪ್ರಿಲ್ 30ರೊಳಗೆ ಭಾರತದ ಚುನಾವಣಾ ಆಯೋಗಕ್ಕೆ ಸಲ್ಲಿಸಬೇಕೆಂದು ಸೂಚಿಸಲಾಗಿದೆ. ಈ ಕುರಿತು ಆಯೋಗದಿಂದ ರಾಜಕೀಯ ಪಕ್ಷಗಳಿಗೆ ಕಳುಹಿಸಲಾಗಿರುವ ವೈಯಕ್ತಿಕ ಪತ್ರದಲ್ಲಿ, ಆಯೋಗವು ರಾಜಕೀಯ ಪಕ್ಷಗಳ ಅಧ್ಯಕ್ಷರು ಮತ್ತು ಪಕ್ಷದ ಹಿರಿಯ ಸದಸ್ಯರೊಂದಿಗೆ ಪರಸ್ಪರ ಅನುಕೂಲಕರ ಸಮಯದಲ್ಲಿ, ಸ್ಥಾಪಿತ ಕಾನೂನಿಗೆ ಅನುಗುಣವಾಗಿ ಚುನಾವಣಾ ಪ್ರಕ್ರಿಯೆಗಳನ್ನು ಮತ್ತಷ್ಟು ಬಲಪಡಿಸಲು ಸಂವಾದವನ್ನು ರೂಪಿಸಲು ವೇದಿಕೆಯನ್ನು ಸೃಜಿಸಲಾಗಿದೆ.

ಇದಕ್ಕೂ ಮೊದಲು, ಕಳೆದ ವಾರ ನಡೆದ ಭಾರತ ಚುನಾವಣಾ ಆಯೋಗದ ಎಲ್ಲಾ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳ ಸಮ್ಮೇಳನದಲ್ಲಿ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಮುಖ್ಯ ಚುನಾವಣಾಧಿಕಾರಿಗಳು, ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಎಲ್ಲಾ ರಾಜ್ಯಗಳ / ಕೇಂದ್ರಾಡಳಿತ ಪ್ರದೇಶಗಳ ಚುನಾವಣಾ ನೋಂದಣಾಧಿಕಾರಿಗಳು, ರಾಜಕೀಯ ಪಕ್ಷಗಳೊಂದಿಗೆ ನಿಯಮಿತವಾಗಿ ಸಂವಹನ ನಡೆಸಲು ಸೂಚನೆ ನೀಡಿದ್ದರು. ಇಂತಹ ಸಭೆಗಳಲ್ಲಿ ಪಡೆದ ಯಾವುದೇ ಸಲಹೆಗಳನ್ನು ಈಗಾಗಲೇ ಕಾನೂನು ಚೌಕಟ್ಟಿನೊಳಗೆ ಕಟ್ಟುನಿಟ್ಟಾಗಿ ಪರಿಹರಿಸಿ, 2025ನೇ ಮಾರ್ಚ್ 31ರೊಳಗೆ ತೆಗೆದುಕೊಂಡ ವರದಿಯನ್ನು ಆಯೋಗಕ್ಕೆ ಸಲ್ಲಿಸಲು ತಿಳಿಸಲಾಗಿತ್ತು. ಅಲ್ಲದೆ, ಚುನಾವಣಾ ಆಯೋಗದ ಈ ವಿನೂತನ ಕಾರ್ಯಕ್ಕೆ ರಾಜಕೀಯ ಪಕ್ಷಗಳೂ ಸಹ ಕೈಜೋಡಿಸುವ ಮೂಲಕ ಪ್ರಜಾಪ್ರಭುತ್ವವನ್ನು ಬಲಿ?ಗೊಳಿಸಲು ಒತ್ತಾಯಿಸಲಾಗಿತ್ತು.

ಭಾರತ ಚುನಾವಣಾ ಆಯೋಗವು ಸಂವಿಧಾನ ಮತ್ತು ಶಾಸನಬದ್ಧ ಚೌಕಟ್ಟಿನ ಪ್ರಕಾರ, ಚುನಾವಣಾ ಪ್ರಕ್ರಿಯೆಗಳ ಎಲ್ಲಾ ಅಂಶಗಳನ್ನು ಒಳಗೊಂಡು ಗುರುತಿಸಿರುವ 28 ಪಾಲುದಾರರಲ್ಲಿ ರಾಜಕೀಯ ಪಕ್ಷಗಳು ಪ್ರಮುಖ ಪಾಲುದಾರರಲ್ಲಿ ಒಂದಾಗಿದೆ. ರಾಜಕೀಯ ಪಕ್ಷಗಳಿಗೆ ಬರೆದ ಪತ್ರದಲ್ಲಿ ಆಯೋಗವು ಜನರ ಪ್ರಾತಿನಿಧ್ಯ ಕಾಯ್ದೆ 1950 ಮತ್ತು 1951; ಮತದಾರರ ನಿಯಮಗಳ ನೋಂದಣಿ 1960; ಚುನಾವಣಾ ನಿಯಮಗಳ ನಡವಳಿಕೆ 1961; ಮಾನ್ಯ ಸುಪ್ರೀಂ ಕೋರ್ಟ್ ಮತ್ತು ಭಾರತದ ಚುನಾವಣಾ ಆಯೋಗವು ನೀಡಿದ ಸೂಚನೆಗಳು, ಕೈಪಿಡಿಗಳು ಮತ್ತು ಕೈಪಿಡಿಗಳ ಆದೇಶಗಳು ಭಾರತ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಕಾಲಕಾಲಕ್ಕೆ ಲಭ್ಯವಿದೆ. ಮುಕ್ತ ಮತ್ತು ನ್ಯಾಯಯುತ ಚುನಾವಣೆಗಳನ್ನು ನಡೆಸಲು ವಿಕೇಂದ್ರೀಕೃತ ಮತ್ತು ಪಾರದರ್ಶಕ ಕಾನೂನು ಚೌಕಟ್ಟನ್ನು ಆಯೋಗವು ಸ್ಥಾಪಿಸಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಡಾ. ಮಂಜುಳಗೆ ಯುವ ಸಂಶೋಧಕಿ ಪ್ರಶಸ್ತಿ

ತುಮಕೂರು: ತುಮಕೂರು ವಿಶ್ವವಿದ್ಯಾನಿಲಯದ ಜೀವರಸಾಯನಶಾಸ್ತ್ರ ವಿಭಾಗದ ಪೋಸ್ಟ್ ಡಾಕ್ಟೋರಲ್ ಸಂಶೋಧನಾರ್ಥಿ ಡಾ. ಮಂಜುಳ ಎಂ. ವಿ. ಅವರು 'ಯುವ ಸಂಶೋಧಕಿ' ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಮಂಜುಳ ಅವರ ಸಂಶೋಧನೆಗಳನ್ನು ಗಮನಿಸಿ 'ವಿಮೆನ್ ಆಫ್ ಸಬ್‌ಸ್ಟೆನ್ಸ್' ಸಂಸ್ಥೆಯು ನವದೆಹಲಿಯಲ್ಲಿ ನಡೆದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ಈ ಪ್ರಶಸ್ತಿ ನೀಡಿ ಗೌರವಿಸಿದೆ. ಮಂಜುಳ ಅವರು 'ಅಂತಾರಾಷ್ಟ್ರೀಯ ಯುವ ವಿಜ್ಞಾನಿ' ಪ್ರಶಸ್ತಿಗೂ ಭಾಜನರಾಗಿದ್ದಾರೆ. ಇವರು ತುಮಕೂರು ವಿವಿ ಜೀವರಸಾಯನಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ. ದೇವರಾಜ ಎಸ್. ಇವರ ಮಾರ್ಗದರ್ಶನದಲ್ಲಿ ಸಂಶೋಧನೆ ನಡೆಸುತ್ತಿದ್ದಾರೆ.



ತುಮಕೂರು ವಿಶ್ವವಿದ್ಯಾಲಯದ ಕನ್ನಡ ಐಚ್ಛಿಕ ಪದವಿಯ ಪಠ್ಯಪುಸ್ತಕ 'ಸಾಹಿತ್ಯ ಧಾರೆ'ಯನ್ನು ಕುಲಪತಿ ಪ್ರೊ. ಎಂ. ವೆಂಕಟೇಶ್ವರಲು ಬಿಡುಗಡೆಗೊಳಿಸಿದರು. ಪಠ್ಯಮಾಲಿಕೆಯ ಪ್ರಧಾನ ಸಂಪಾದಕರಾದ ಪ್ರೊ. ನಿತ್ಯಾನಂದ ಬಿ. ಶೆಟ್ಟಿ, ಸಂಪಾದಕರಾದ ಡಾ. ಬಾಳಪ್ಪ ಎ. ಬಿ., ಡಾ. ನಳಿನ ಎನ್., ಡಾ. ಗಿರಿಜಾಂಬ ಕೆ. ಎನ್. ಮತ್ತು ಡಾ. ನರಸಿಂಹಪ್ಪ ಇದ್ದಾರೆ.

# ಪೋಲೀಸ್ ಇಲಾಖೆಯಿಂದ ನಾಳೆ ಕುರುಕ್ಷೇತ್ರ ನಾಟಕ

ತಿಪಟೂರು : ನಗರದ ಉಪವಿಭಾಗ ಪೋಲೀಸ್ ಇಲಾಖೆಯ ವತಿಯಿಂದ ಶ್ರೀ ಮಾರುತಿ ಕೃಪಾಪೋಷಿತ ನಾಟಕ ಮಂಡಳಿವತಿಯಿಂದ ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಮಾರ್ಚ್ 15 ಶನಿವಾರ ದಂದು ರಾತ್ರಿ 8.30 ಕ್ಕೆ ದಿ.ಪುಟ್ಟಸ್ವಾಮಯ್ಯ ವಿರಚಿತ ಕುರುಕ್ಷೇತ್ರ ಅಥವಾ ಧರ್ಮರಾಜ್ಯ ಸ್ಥಾಪನೆ ಎಂಬ ಪೌರಾಣಿಕ ನಾಟಕವನ್ನು ಪ್ರದರ್ಶನ ನೀಡಲಿದ್ದಾರೆ. ಹಾಗೂ ವಾದ್ಯಗೋಷ್ಠಿ ವೃಂದದವರಾಗಿ ನಟರಾಜು ಕ್ಯಾಸಿಯೋ, ಮಂಜುನಾಥ್ ತಬಲ, ನವೀನ್ ಕ್ಲಾರಿಯೋನೆಟ್ ಮತ್ತು ಹನುಮಂತರಾಜು ಕಡೆಯಿಂದ ಎಲ್.ಇ.ಡಿ. ಸ್ಕ್ರೀನ್ ಡ್ರಾಮಾ ಸೀನರಿ ವ್ಯವಸ್ಥೆ ಮಾಡಲಾಗಿದೆ.

# ಇ-ಖಾತಾ ವಿತರಣೆಯಲ್ಲಿ ಮಾ.12ರವರೆಗೆ ಶೇ.59.46 ಪ್ರಗತಿ



ಮಧುಗಿರಿ: ಫೆ.2 ರಿಂದ ಮಾ.12 ರ ವರೆವಿಗೂ ಶೇ.59.46 ರಷ್ಟು ಇ ಖಾತಾ ವಿತರಣೆಯಲ್ಲಿ ಪ್ರಗತಿ ಸಾಧಿಸಲಾಗಿದೆ ಎಂದು ಮುಖ್ಯಾಧಿಕಾರಿ ಸುರೇಶ್ ತಿಳಿಸಿದರು.

ಪುರಸಭೆಯ ಕಛೇರಿಯಲ್ಲಿ ಮಾತನಾಡಿದ ಅವರು ಸಹಕಾರ ಸಚಿವರಾದ ಕೆ.ಎನ್ ರಾಜಣ್ಣನವರು ಹಾಗೂ ಜಿಲ್ಲಾಧಿಕಾರಿಗಳಾದ ಶುಭ ಕಲ್ಯಾಣ್ ರವರು ಫೆ.2 ರಂದು ಅನಾಧಿಕೃತ ಸ್ವತ್ತುಗಳಿಗೆ ಬಿ. ಖಾತೆಗಳನ್ನು ನೀಡುವ ಸರ್ಕಾರದ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದರು.

ಫೆ. 2 ರಿಂದ ಇಲ್ಲಿಯ ವರೆವಿಗೆ ಪಟ್ಟಣದಲ್ಲಿನ ಸ್ವತ್ತುಗಳಿಗೆ ಸುಮಾರು 565 ಸ್ವತ್ತುಗಳಲ್ಲಿ 336 ಎ ಖಾತೆ ಮತ್ತು ಬಿ ಖಾತೆಗಳನ್ನು ವಿತರಿಸ ಲಾಗಿದ್ದು ಇದರಿಂದಾಗಿ ಸುಮಾರು 25 ಲಕ್ಷಕ್ಕೂ ಹೆಚ್ಚು ತೆರಿಗೆ ಹಣವನ್ನು ಸಾರ್ವಜನಿಕರಿಂದ ಸ್ವೀಕೃತವಾಗಿದೆ. ನಾಗರೀಕರು ತಮ್ಮ ಸ್ವತ್ತುಗಳಿಗೆ ಇ ಖಾತೆಗಳನ್ನು ಪಡೆಯಲು ಸರ್ಕಾರ ನಿಗಧಿಪಡಿಸಿರುವ ಕೊನೆಯ ದಿನಾಂಕದ ವರೆವಿಗೆ ಕಾಯದೆ ಪ್ರಸ್ತಕ ಸಾಲಿನ ತೆರಿಗೆಗೆ ದುಪ್ಪಟ್ಟು ತೆರಿಗೆ ಹಣವನ್ನು ಪಾವತಿಸುವುದರ ಜತೆಯಲ್ಲಿ ಸ್ವತ್ತಿನ ನೊಂದಾಣಿ ಪತ್ರ, ವಿಭಾಗ ಪತ್ರ, ದಾನ ಪತ್ರ, ಹಕ್ಕು ಪತ್ರ, ಹತ್ತು ವರ್ಷಗಳ ಇ ಸಿ ಪತ್ರ, ಸ್ವತ್ತಿನ ಒಂದು ಜಿಪಿಎಸ್ ಲೋಕೇಷನ್ ಪೋಟೋ, ಸ್ವತ್ತಿನ ಮಾಲೀಕರ ಒಂದು ಭಾವಚಿತ್ರದೊಂದಿಗೆ ಸರ್ಕಾರದ ನಿಯಮಗಳಂತೆ ಇ ಖಾತೆಗಾಗಿ ಅರ್ಜಿ ಸಲ್ಲಿಸ ಬಹುದಾಗಿದ್ದು ಈ ಬಾರಿ ಪುರಸಭೆಗೆ ಹೆಚ್ಚು ತೆರಿಗೆ ಹಣ ಹರಿದು ಬರುವ ನೀರೀಕ್ಷೆ ಇದೆ ಎಂದರು.

# ನ್ಯಾಯಾಲಯ ಆದೇಶದ ಹಿನ್ನೆಲೆ; ಬದಲಾದ ಕೇಂದ್ರ ಸಚಿವರ ಕಾರ್ಯಕ್ರಮದ ಸ್ಥಳ




ತುರುವೇಕೆರೆ: ಕೆಲವು ತಿಂಗಳ ಹಿಂದೆ ನ್ಯಾಯಾಲಯ ನೀಡಿದ್ದ ಆದೇಶ ಇಂದು ಕೇಂದ್ರ ಸರ್ಕಾರದ ಸಚಿವರ ಸರ್ಕಾರಿ ಕಾರ್ಯಕ್ರಮದ ಸ್ಥಳವನ್ನು ಬದಲಾಯಿಸಿದೆ. ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರ ತುರುವೇಕೆರೆ ಕ್ಷೇತ್ರ ಭೇಟಿ ಹಾಗೂ ಕ್ಷೇತ್ರದ ಫಲಾನುಭವಿಗಳಿಗೆ ಕೇಂದ್ರ ಸರ್ಕಾರದ ವಿಶೇಷ ಅಡಿಪ್ ಯೋಜನೆಯಡಿ ವಿಶೇಷಚೇತನರಿಗೆ ಉಚಿತ ಸಾಧನ ಸಲಕರಣೆಗಳ ವಿತರಣೆ, ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ ಸಭೆಯನ್ನು ಇದೇ ತಿಂಗಳ 14ರಂದು ಪಟ್ಟಣದ ಗುರುಭವನ ಆವರಣದಲ್ಲಿ ನಡೆಸಲಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು, ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ, ವಿ.ಸೋಮಣ್ಣ, ಮಾಜಿ ಸಿಎಂ ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಶಾಸಕ ಎಂ.ಟಿ.ಕೃಷ್ಣಪ್ಪ, ಮಾಜಿ ಶಾಸಕ ಮಸಾಲಾ ಜಯರಾಮ್ ಭಾವಚಿತ್ರಗಳನ್ನು ಒಳಗೊಂಡ ಕೆಲವು ಫ್ಲೆಕ್ಸ್‌ಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿದವು.

ಇದಾದ ಕೆಲವೇ ಗಂಟೆಗಳಲ್ಲಿ ಮತ್ತೆ ಸ್ಥಳ ಬದಲಾವಣೆಯೊಂದಿಗೆ ಅದೇ ಫ್ಲೆಕ್ಸ್‌ಗಳು ಸಾಮಾಜಿಕ ಜಾಲತಾಣ ವಾಟ್ಸಪ್ ಅಲ್ಲಿ ಬಂದವು. ಸ್ಥಳ ಬದಲಾವಣೆಗೆ ಕಾರಣ ನ್ಯಾಯಾಲಯದ ಆದೇಶ ಎಂಬುದು. ಏನಿತ್ತು ನ್ಯಾಯಾಲಯದ ಆದೇಶ ಎನ್ನುವುದಾದರೆ ವಾಸ್ತವವಾಗಿ ಕೆ.ಹಿರಣ್ಣಯ್ಯ ರಂಗಮಂದಿರ ಆವರಣ ಅಥವಾ ಗುರುಭವನದ ಆವರಣ ಪಟ್ಟಣದ ಶತಮಾನದ ಶಾಲೆಯಾದ ಸರ್ಕಾರಿ ಬಾಲಕರ ಪಾಠಶಾಲೆಯದ್ದಾಗಿದೆ. ಈ ಶಾಲೆಯ ಆವರಣದಲ್ಲಿ ಶಾಲೆಯ ಕಾರ್ಯಕ್ರಮ ಹೊರತುಪಡಿಸಿ ಮತ್ತೆ ಯಾವ ಕಾರ್ಯಕ್ರಮಗಳನ್ನು ನಡೆಸುವಂತಿಲ್ಲ ಎಂದು ಕೆಲವು ತಿಂಗಳ ಹಿಂದೆ ನ್ಯಾಯಾಲಯ ಆದೇಶ ನೀಡಿತ್ತು.

ಈ ಹಿನ್ನೆಲೆಯಲ್ಲಿ ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರ ತುರುವೇಕೆರೆ ಕ್ಷೇತ್ರ ಭೇಟಿ ಹಾಗೂ ಕ್ಷೇತ್ರದ ಫಲಾನುಭವಿಗಳಿಗೆ ಕೇಂದ್ರ ಸರ್ಕಾರದ ವಿಶೇಷ ಅಡಿಪ್ ಯೋಜನೆಯಡಿ ವಿಶೇಷಚೇತನರಿಗೆ ಉಚಿತ ಸಾಧನ ಸಲಕರಣೆಗಳ ವಿತರಣೆ, ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ ಸಭೆಯ ಸ್ಥಳ ಗುರುಭವನದಿಂದ ಪಟ್ಟಣದ ವೈ.ಟಿ.ರಸ್ತೆಯಲ್ಲಿ ಶ್ರೀ ಸತ್ಯಗಣಪತಿ ಆಸ್ಥಾನ ಮಂಟಪದಲ್ಲಿ ನಡೆಸಲಾಗುತ್ತಿದೆ.

# ಮಧುಗಿರಿ; ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸಹಾಯವಾಣಿ

ಮಧುಗಿರಿ: ಮಧುಗಿರಿ ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಆಗದ ರೀತಿಯಲ್ಲಿ ನೋಡಿಕೊಳ್ಳಲು ಜಿಲ್ಲಾಧಿಕಾರಿಗಳು ಸೂಚಿಸಿದಂತೆ ಸಹಾಯವಾಣಿ ಕೇಂದ್ರವನ್ನು ತೆರೆಯಲಾಗಿದೆ ಎಂದು ತಹಶೀಲ್ದಾರ್ ಶಿರಿನ್ ತಾಜ್ ತಿಳಿಸಿದ್ದಾರೆ ಸಾರ್ವಜನಿಕರುಗಳು ಈ ಕೆಳಕಂಡ . ತಾಲೂಕು ಕಚೇರಿಯ ದೂರವಾಣಿ ಸಂಖ್ಯೆ ಸಂಖ್ಯೆ08137-200924.. ತಾಲೂಕು ಪಂಚಾಯಿತಿಯ ದೂರವಾಣಿ ಸಂಖ್ಯೆ..9632022924. ಮತ್ತು ಪುರಸಭಾ ಕಚೇರಿಯ.8971142810. ದೂರವಾಣಿ ಸಂಖ್ಯೆಗೆ ಸಾರ್ವಜನಿಕರುಗಳು ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ತಿಳಿಸಲು ಸಂಪರ್ಕಿಸಬಹುದಾಗಿದೆ ಇದರ ಸದುಪಯೋಗ ಪಡೆಯಲು ಸಾರ್ವಜನಿಕರಲ್ಲಿ ಮನವಿ ಮಾಡಲಾಗಿದೆ ಎಂದು ತಹಶೀಲ್ದಾರ್ ಶಿರಿನ್ ತಾಜ್ ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ

# ದ್ವಿತೀಯ ಪಿಯುಸಿ ಅರ್ಥಶಾಸ್ತ್ರ ಪರೀಕ್ಷೆ : 984 ವಿದ್ಯಾರ್ಥಿಗಳು ಗೈರು

ತುಮಕೂರು: ಜಿಲ್ಲೆಯಲ್ಲಿ ಇಂದು ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ-1ರ ಅರ್ಥಶಾಸ್ತ್ರ ವಿಷಯದಲ್ಲಿ 984 ವಿದ್ಯಾರ್ಥಿಗಳು ಗೈರು ಹಾಜರಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಬಾಲಗುರುಮೂರ್ತಿ ತಿಳಿಸಿದ್ದಾರೆ. ಅರ್ಥಶಾಸ್ತ್ರ ವಿಷಯಕ್ಕೆ ಒಟ್ಟು 13,828 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಈ ಪೈಕಿ 12,844 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ ಎಂದು ಅವರು ತಿಳಿಸಿದ್ದಾರೆ.

# ಚಿಕ್ಕೇಗುಡ್ಡ ಕಾವಲ್ ಗ್ರಾಮದ ದಲಿತ ರೈತರು ಅತಂತ್ರ: ಜಮೀನು ಮಂಜೂರು ದಾಖಲೆ ಮಾಡುವಂತೆ ಮನವಿ

ಗುಬ್ಬಿ: ಹತ್ತಾರು ವರ್ಷಗಳಿಂದ ಭೂಮಿ ಅನುಭವದಲ್ಲಿರುವ ಬಿಕ್ಕೇಗುಡ್ಡ ಕಾವಲ್ ಗ್ರಾಮದ ದಲಿತ ಕುಟುಂಬಗಳಿಗೆ ಭೂಮಿ ಮಂಜೂರು ದಾಖಲೆ ಮಾಡದೆ ತೀವ್ರ ತೊಂದರೆ ಅನುಭವಿಸಿದ್ದಾರೆ. ಈ ಬಗ್ಗೆ ಸಾಕಷ್ಟು ಬಾರಿ ಮನವಿ ಮಾಡಿದ್ದೇವೆ. ಆದರೂ ಯಾವುದೇ ದಾಖಲೆ ಇಲ್ಲದೆ 99 ಎಕರೆ ಪ್ರದೇಶದಲ್ಲಿ 50 ಕ್ಕೂ ಅಧಿಕ ದಲಿತ ಕುಟುಂಬ ಪರದಾಡುತ್ತಿದೆ. ಈ ನಿಟ್ಟಿನಲ್ಲಿ ಅನುಭವದಾರರಿಗೆ ದಾಖಲೆ ಮಾಡಿಕೊಡುವಂತೆ ಸಂತ್ರಸ್ತ ದಲಿತ ಕುಟುಂಬ ಸದಸ್ಯರು ತಾಲ್ಲೂಕು ಆಡಳಿತಕ್ಕೆ ಮನವಿ ಸಲ್ಲಿಸಿದರು.

ಪಟ್ಟಣದ ತಾಲ್ಲೂಕು ಕಚೇರಿಗೆ ಆಗಮಿಸಿದ ಸಂತ್ರಸ್ತರು ಬಿಕ್ಕೇಗುಡ್ಡ ಕಾವಲ್ ಸರ್ವೇ ನಂಬರ್ 93 ರಲ್ಲಿನ ಜಮೀನು ದುರಸ್ತಿ ಮಾಡಿ ನಕ್ಷೆ ಸಿದ್ಧಪಡಿಸಿ ಈ ದಾಖಲೆ ಆಧಾರ ಅರ್ಹ ಫಲಾನು ಭವಿಗಳಿಗೆ ಭೂಮಿ ಮಂಜೂರು ಮಾಡಿ ಕೊಡುವಂತೆ ಅರ್ಜಿ ಸಲ್ಲಿಸಿ ಶೀಘ್ರ ದಾಖಲೆ ನೀಡಿದರೆ ಕೃಷಿ ಚಟುವಟಿಕೆ ನಡೆಸುತ್ತೇವೆ ಎಂದು ಮನವಿ ಮಾಡಿದರು.

ಗ್ರಾಮ ಪಂಚಾಯಿತಿ ಸದಸ್ಯ ವಿದ್ಯಾ ಸಾಗರ್ ಮಾತನಾಡಿ ಎಲ್ಲಾ ಸರ್ಕಾರ ದಿಂದ ಮೂಲ ಸವಲತ್ತು ಪಡೆದು ನೂರಾರು ವರ್ಷದಿಂದ ವಾಸವಿರುವ ಬಿಕ್ಕೇಗುಡ್ಡ ಕಾವಲ್ ಗ್ರಾಮದಲ್ಲಿ 99 ಎಕರೆ ಪ್ರದೇಶದಲ್ಲಿ ಬದುಕು ಕಟ್ಟಿಕೊಂಡ ದಲಿತ ಕುಟುಂಬ ಈಗ ದ್ವಿಗುಣ ಸಂಖ್ಯೆಯಲ್ಲಿದೆ. ಹೊಸ ಕುಟುಂಬ ಸೃಷ್ಟಿಯಾದರೂ ಜಮೀನು ಭಾಗ ಮಾಡಿಕೊಳ್ಳಲಾಗದ ಸ್ಥಿತಿ ಊರಿನ ಸಹೋದರರಲ್ಲಿ ಕಂಡಿದೆ. ಖಾಯಂ ಮಂಜೂರಾತಿ ಪಡೆದ ಕುಟುಂಬಕ್ಕೆ ಮಾತ್ರ ಜಮೀನು ನೀಡಿದರೆ ಉಳಿದ ಕುಟುಂಬ ಒಕ್ಕಲೆಬ್ಬಿಸಿದಂತೆ ಆಗುತ್ತದೆ. ಶೇಕಡಾ 80 ರಷ್ಟು ಮಂದಿ ಸಂತ್ರಸ್ತ ದಲಿತ ಕುಟುಂಬಕ್ಕೆ ಅನ್ಯಾಯ ಮಾಡಿದಂತೆ ಆಗುತ್ತದೆ. ಬಗರ್ ಹುಕುಂ ಸಮಿತಿ, ಅಕ್ರಮ ಸಕ್ರಮ ಹೀಗೆ ಅನೇಕ ರೀತಿ ಅರ್ಜಿ ಸಲ್ಲಿಸಿದ್ದರೂ ಪ್ರಯೋಜನ ವಾಗಿಲ್ಲ. ಈ ನಿಟ್ಟಿನಲ್ಲಿ ಎಲ್ಲಾ ಫಲಾನುಭವಿ ಗಳಿಗೆ ಭೂಮಿ ನೀಡಬೇಕು. ಇಲ್ಲವಾದಲ್ಲಿ ಹೋರಾಟದ ಹಾದಿ ತುಳಿಯುತ್ತೇವೆ ಎಂದು ಎಚ್ಚರಿಸಿದರು.

ಮನವಿ ಸ್ವೀಕರಿಸಿದ ತಹಶೀಲ್ದಾರ್ ಬಿ.ಆರತಿ ಸಂತ್ರಸ್ತರ ಜೊತೆ ಚರ್ಚಿಸಿ ತಾಂತ್ರಿಕ ಸಮಸ್ಯೆ ಬಗ್ಗೆ ತಿಳಿಸಿ ಸರ್ಕಾರದ ಗಮನಕ್ಕೆ ತಂದು ಒಂದು ಪರಿಹಾರ ಒದಗಿಸುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಗ್ರಾಪಂ ಸದಸ್ಯೆ ಚಿಕ್ಕಮ್ಮ, ತಾಪಂ ಮಾಜಿ ಸದಸ್ಯ ಮುಳ್ಳುಕಟ್ಟಯ್ಯ, ಮುಖಂಡರಾದ ದೊಡ್ಡೇಗೌಡ, ಗೋವಿಂದಪ್ಪ, ಸೋಮಣ್ಣ, ಕೃಷ್ಣಪ್ಪ ಇತರರು ಇದ್ದರು.

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101
**Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper